ಕರ್ನಾಟಕ ಸರ್ಕಾರದ ನಡವಳಿಗಳು.

ವಿಷಯ:-2014-15 ನೇ ಆಯವ್ಯಯದಲ್ಲಿ ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮಗಳಿಗೆ ಸಂಬಂಧಿಸಿದ ಘೋಷಣೆಗಳನ್ನು ಅನುಷ್ಠಾನ-ಗೊಳಿಸುವ ಬಗ್ಗೆ.

ಓದಲಾಗಿದೆ:1)ಸರ್ಕಾರದ ಆದೇಶ ಸಂಖ್ಯೆ:ಸಕಇ 88 ಸಮನ್ವಯ 2013,ದಿ:04-09-2013.
2)ಸರ್ಕಾರದ ಆದೇಶ ಸಂಖ್ಯೆ ಸಕಇ 138 ಎಸ್‌ಡಿಸಿ 2012,ದಿ:03-10-2012.
3) ವ್ಯವಸ್ಥಾಪಕ ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಬಿವೃದ್ಧಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ಡಾ. ಬಿ.ಆರ್.ಅಂಅನಿ/ಸಂಯೋ:ಬಜೆಟ್: 2014-15/667,ದಿನಾಂಕ:21-04-2014
4)ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ಕಮವಾಪಪಂಅನಿ:ಉ.ಯೋ: ಭೂಒಯೋ:2014-15,ದಿನಾಂಕ:07-04-2014.

D-484
24/6/14
23/06

-o-

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಸಂಖ್ಯೆ (1) &(2) ರ ಆದೇಶಗಳಲ್ಲಿ 2013-14 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಡಾ. ಬಿ.ಆರ್. ಅಂಬೇಡ್ಕರ್ ಅಬಿವೃದ್ಧಿ ನಿಗಮ ನಿಯಮಿತ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತಗಳ ಭೂ ಒಡೆತನ ಯೋಜನೆಯಡಿ ಘಟಕ ವೆಚ್ಚವನ್ನು ರೂ. 5.00 ಲಕ್ಷದಿಂದ ರೂ. 7.50 ಲಕ್ಷಗಳಿಗೆ ಹಾಗೂ ಸ್ವಯಂ ಉದ್ಯೋಗ ಯೋಜನೆಯಡಿಯಲ್ಲಿ ನೀಡಲಾಗುತ್ತಿದ್ದ ಸಹಾಯಧನ, ಘಟಕ ವೆಚ್ಚ ಶೇ 33 ರಷ್ಟು ಅಥವಾ ಗರಿಷ್ಠ ರೂ. 1.00 ಲಕ್ಷಗಳಿಗೆ ನಿಗಧಿಪಡಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಉಲ್ಲೇಖ (3)&(4) ರ ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು ಡಾ. ಬಿ.ಆರ್. ಅಂಬೇಡ್ಕರ್ ಅಬಿವೃದ್ಧಿ ನಿಗಮ ನಿಯಮಿತ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃಧ್ಧಿ ನಿಗಮ ನಿಯಮಿತ, ಬೆಂಗಳೂರು ಇವರು 2014-15 ನೇ ಸಾಲಿನ ಆಯವ್ಯಯದ ಕಂಡಿಕೆಯ ಕ್ರ,ಸಂ175 ರಲ್ಲಿ ಘೋಷಿಸಿರುವಂತೆ ಸಹಾಯಧನದ ಗರಿಷ್ಟ ಮಿತಿಯನ್ನು ರೂ. 1.00 ಲಕ್ಷಗಳಿಂದ ರೂ. 2.00 ಲಕ್ಷಗಳಿಗೆ ಹೆಚ್ಚಿಸಲು ಹಾಗೂ ಕ್ರ,ಸಂ,176 ರಲ್ಲಿ ಭೂ ಒಡೆತನ ಯೋಜನೆಯಡಿ ಘಟಕ ವೆಚವನ್ನು ರೂ. 7.50 ಲಕ್ಷಗಳಿಂದ ರೂ. 10.00 ಲಕ್ಷಗಳಿಗೆ ಹೆಚ್ಚಿಸಲು ಈ ಯೋಜನೆಗಳನ್ನು ಅನುಷ್ಠಾನಮಾಡಲು ಅನುಕೂಲವಾಗುವಂತೆ ಆದೇಶ ಹೊರಡಿಸುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಕೆಳಗಿನಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 91 ಎಸ್‌ಡಿಸಿ 2014,**
**ಬೆಂಗಳೂರು, ದಿನಾಂಕ: 20/06/2014.**

2014-15 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದ ಡಾ. ಬಿ.ಆರ್. ಅಂಬೇಡ್ಕರ್ ಅಬಿವೃದ್ಧಿ ನಿಗಮ ನಿಯಮಿತ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃಧ್ಧಿ ನಿಗಮ ನಿಯಮಿತಗಳು



ADM: Pl put up letter to all implementing officers
24/6/14 ADM

ಅನುಷ್ಠಾನಗೊಳಸುತ್ತಿರುವ ಯೋಜನೆಗಳಗೆ ಈ ಕೆಳಕಂಡಂತೆ ಸಹಾಯಧನ ಹೆಚ್ಚಿಸಿ ಆದೇಶಿಸಲಾಗಿದೆ.

1. 2014-15 ನೇ ಸಾಲಿನಿಂದ "ಹೆಚ್ಚಿನ ಸಂಖ್ಯೆಯಲ್ಲಿ ಸಾಲವನ್ನು ಬ್ಯಾಂಕುಗಳಿಂದ ಪಡೆಯಲು ಅನುಕೂಲವಾಗುವಂತೆ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮಗಳಿಂದ ಘಟಕ ವೆಚ್ಚ ರೂ.1.00 ಲಕ್ಷಗಳಿಗೆ ಮೀರಿದ ಪ್ರಕರಣಗಳಲ್ಲಿ ಮಾತ್ರ ಸಹಾಯಧನ ಗರಿಷ್ಠ ಮಿತಿಯನ್ನು ರೂ. 1.00 ಲಕ್ಷಗಳಿಂದ ರೂ. 2.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ.

2. 2014-15 ನೇ ಸಾಲಿನಿಂದ "ಭೂ ಒಡೆತನ ಯೋಜನೆಯಡಿಯಲ್ಲಿ ಜಮೀನು ಇಲ್ಲದಿರುವ ಕೃಷಿ ಕಾರ್ಮಿಕರಿಗೆ ಜಮೀನು ಖರೀದಿ ಮಾಡಿ ವಿತರಿಸಲು ಈಗಿರುವ ಘಟಕ ವೆಚ್ಚವನ್ನು ರೂ. 7.50 ಲಕ್ಷಗಳಿಂದ ರೂ. 10.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ.

ಇದಕ್ಕಾಗಿ ತಗಲುವ ವೆಚ್ಚವನ್ನು 2014-15 ನೇ ಸಾಲಿನ ಆಯವ್ಯಯದಲ್ಲಿ ಪರಿಶಿಷ್ಟ ಜಾತಿಗೆ ಸಂಬಂಧಿಸಿದಂತೆ ಲೆಕ್ಕಶೀರ್ಷಿಕೆ 2225-01-800-0-19, 2225-01-190-2-01 ಹಾಗೂ ಪರಿಶಿಷ್ಟ ಪಂಗಡಕ್ಕೆ ಸಂಬಂಧಿಸಿದಂತೆ ಲೆಕ್ಕಶೀರ್ಷಿಕೆ 2225-02-800-0-06 ರಲ್ಲಿ ನಿಗಮಗಳಿಗೆ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 359 ವೆಚ್ಚ-3/2013, ದಿನಾಂಕ:04-06-2014 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ವಿ.ರತ್ನಮ್ಮ) 20/06
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ.

1. ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
3. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
6. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಕೇಂದ್ರ, 2ನೇ ಮಹಡಿ, ಸೌತ್ ಬ್ಲಾಕ್, ಖನಿಜ ಭವನ, ದೇವರಾಜ ಅರಸು ರಸ್ತೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-3 ಮತ್ತು 9) ಆರ್ಥಿಕ ಇಲಾಖೆ, ವಿಧಾನ ಸೌಧ,
9. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ,
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ,
11. ಸರ್ಕಾರದ ಉಪ ಕಾರ್ಯದರ್ಶಿ-1&2, ಸಮಾಜ ಕಲ್ಯಾಣ ಇಲಾಖೆ,ವಿಕಾಸ ಸೌಧ.
12. ಸರ್ಕಾದ ಅಧೀನಕಾರ್ಯದರ್ಶಿ-1 ಮತ್ತು 2, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.
13. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ವಿಷಯ:- ಡಾ|| ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಅನುಷ್ಠಾನಗೊಳಿಸುತ್ತಿರುವ ರೂ.1.00 ಲಕ್ಷಕ್ಕೂ ಮೇಲ್ಪಟ್ಟ ವಿವಿಧ ಸಾಲದ ಯೋಜನೆಗಳಿಗೆ ಸಹಾಯಧನವನ್ನು ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ:- ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ ಏಕ ಕಡತ ಸಂಖ್ಯೆ: ಡಾ||ಬಿ.ಆರ್.ಅಂನಿ/ವಿವಿಧಸಾಲ/ಹಣಕಾಸು/ಅನುದಾನ/02/2012-13, ದಿನಾಂಕ: 20-07-2012

ಪ್ರಸ್ತಾವನೆ:-

ಮೇಲೆ ಓದಲಾದ ಏಕ ಕಡತದಲ್ಲಿ ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಪರಿಶಿಷ್ಟ ಜಾತಿಯ ನಿರುದ್ಯೋಗಿ ಕುಟುಂಬಗಳಿಗೆ ಆದಾಯ ತರುವಂತಹ ಆರ್ಥಿಕ ಅಭಿವೃದ್ಧಿ ಚಟುವಟಿಕೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಸ್ವಯಂ ಉದ್ಯೋಗ ಯೋಜನೆಯನ್ನು ಸಹಾಯಧನ, ಅಂಚಿನ ಹಣ, ಬ್ಯಾಂಕ್ ಸಾಲ ಅಥವಾ ರಾಷ್ಟ್ರೀಯ ಹಣಕಾಸು ಸಂಸ್ಥೆಗಳಾದ NSFDC ನೇರಸಾಲ ಯೋಜನೆಯಡಿ ವಿವಿಧ ಚಟುವಟಿಕೆಗಳನ್ನು ಗುರುತಿಸಿ ಅನುಷ್ಠಾನಗೊಳಿಸಲಾಗುತ್ತಿದೆ. ಸ್ವಯಂ ಉದ್ಯೋಗ ಯೋಜನೆಯಡಿ ರೂ.1.00 ಲಕ್ಷಕ್ಕೆ ಒಳಪಟ್ಟ ಚಟುವಟಿಕೆಗಳಿಗೆ ಘಟಕ ವೆಚ್ಚದಲ್ಲಿ ಶೇ.50%ರಷ್ಟು ಅಥವಾ ಗರಿಷ್ಠ ರೂ.25,000/- ಸಹಾಯಧನ ಮಂಜೂರು ಮಾಡಿ ಉಳಿದ ಸಾಲದ ಭಾಗವನ್ನು ಬ್ಯಾಂಕ್‌ಗಳ ವತಿಯಿಂದ ಅಥವಾ ರಾಷ್ಟ್ರೀಯ ಹಣಕಾಸು ಅಭಿವೃದ್ಧಿ ನಿಗಮಗಳಿಂದ ಸಾಲ ಪಡೆದು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಸ್ವಯಂ ಉದ್ಯೋಗ ಯೋಜನೆಯ ಐ.ಎಸ್.ಬಿ ಕಾರ್ಯಕ್ರಮಗಳಡಿ ರೂ.1.00 ಲಕ್ಷಕ್ಕೂ ಮೇಲ್ಪಟ್ಟಿರುವ ಘಟಕ ವೆಚ್ಚದ ವಿವಿಧ ಚಟುವಟಿಕೆಗಳಿಗೆ ನಿಗಮದಿಂದ ಶೇ.20ರಷ್ಟು ಅಂಚಿನ ಹಣ ಅಥವಾ ಗರಿಷ್ಠ ರೂ.1.00 ಲಕ್ಷದ ವರೆಗೆ ನೀಡಿ (ಶೇ.4ರ ಬಡ್ಡಿದರದಲ್ಲಿ) ಉಳಿದ ಹಣವನ್ನು ಬ್ಯಾಂಕ್‌ಗಳಿಂದ ಸಾಲವನ್ನು ಅಥವಾ ರಾಷ್ಟ್ರೀಯ ಹಣಕಾಸು ಅಭಿವೃದ್ಧಿ ನಿಗಮಗಳಿಂದ ನೇರಸಾಲ ಯೋಜನೆಗಳಡಿ ಸಾಲವನ್ನು ಪಡೆದು ಅನುಷ್ಠಾನಗೊಳಿಸಲಾಗುತ್ತಿದೆ. ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ನೇರಸಾಲ ಯೋಜನೆಯಡಿ ವಿವಿಧ ಸೌಲಭ್ಯ ಕೋರಿ ಹೆಚ್ಚಿನ ಬೇಡಿಕೆಯನ್ನು ಸಲ್ಲಿಸುತ್ತಿದ್ದು, ನೇರಸಾಲ ಕಾರ್ಯಕ್ರಮದಡಿ ಅನುಷ್ಠಾನ ಮಾಡುವ ಸಾಲ ಯೋಜನೆಗಳಲ್ಲಿ ಅನೇಕ ಕಾರಣಗಳಿಂದ ನೀಡಿದ ಸಾಲದ ಮರುಪಾವತಿಯು ನಿರೀಕ್ಷಿತ ಮಟ್ಟದಲ್ಲಿ ಆಗುತ್ತಿಲ್ಲ. ನಿಗಮದ 191ನೇ ನಿರ್ದೇಶಕ ಮಂಡಳಿ ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ ಘಟಕ ವೆಚ್ಚ ರೂ.1.00 ಲಕ್ಷಕ್ಕೂ ಮೇಲ್ಪಟ್ಟ ಪ್ರಸ್ತಾವನೆಗಳಿಗೆ ಶೇ 33%ರಷ್ಟು ಅಥವಾ ಗರಿಷ್ಠ ರೂ.1.00ಲಕ್ಷದವರೆಗೆ ಸಹಾಯಧನವನ್ನು ಮಂಜೂರು ಮಾಡಿ ಬ್ಯಾಂಕುಗಳ ಸಹಯೋಗದೊಂದಿಗೆ ಸಾಲ ಪಡೆದು ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ತೀರ್ಮಾನಿಸಿ, ನಿಗಮದಲ್ಲಿ ಅನುಷ್ಠಾನಗೊಳಿಸುವ ರೂ.1.00ಲಕ್ಷಕ್ಕೂ ಮೇಲ್ಪಟ್ಟ ಘಟಕ ವೆಚ್ಚವಿರುವ ಘಟಕಗಳಿಗೆ ಒಟ್ಟಾರೆ ಘಟಕ ವೆಚ್ಚದ ಶೇ33%ರಷ್ಟು ಅಥವಾ ಗರಿಷ್ಠ ರೂ.1.00 ಲಕ್ಷದವರೆಗೆ ಸಹಾಯಧನವನ್ನು ಮಂಜೂರು ಮಾಡಲು ಹಾಗೂ ಉಳಿದ ಸಾಲದ ಮೊತ್ತವನ್ನು ಬ್ಯಾಂಕ್‌ಗಳಿಂದ ಪಡೆದು, ಕಾರ್ಯಕ್ರಮವನ್ನು ಅನುಷ್ಠಾನ ಮಾಡುವ ಬಗ್ಗೆ. ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಸರ್ಕಾರವು ಸದರಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ:ಸಕಇ 138 ಎಸ್‌ಡಿಸಿ 2012,
ಬೆಂಗಳೂರು ದಿನಾಂಕ:03.10.2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದ ಮೂಲಕ

ಮ.ತಿ.ನೋ

ಅನುಷ್ಠಾನಗೊಳಿಸುತ್ತಿರುವ ಪ್ರಸ್ತುತ 1.00 ಲಕ್ಷ ಮೇಲ್ಪಟ್ಟ ಬೀಜ ಧನ ಸಾಲದ ಯೋಜನೆಯನ್ನು ಸಹಾಯಧನ ಹಾಗೂ ಬ್ಯಾಂಕ್ ಸಾಲ ಯೋಜನೆಯನ್ನಾಗಿ ಪರಿವರ್ತಿಸಿದೆ. ಘಟಕ ವೆಚ್ಚದ ಶೇ.33% ಅಥವಾ ಗರಿಷ್ಠ ರೂ.1.00 ಲಕ್ಷದವರೆಗೆ ಸಹಾಯಧನವನ್ನು ಫಲಾನುಭವಿಗಳಿಗೆ ಬ್ಯಾಂಕ್‌ಗಳು ಸಾಲವನ್ನು ಮಂಜೂರು ಮಾಡಿದ ನಂತರ ಬ್ಯಾಂಕಿಗೆ ನೇರವಾಗಿ ಬಿಡುಗಡೆ ಮಾಡುವ ಷರತ್ತಿನೊಂದಿಗೆ ಮಂಜೂರಾತಿ ನೀಡಿ ಆದೇಶಿಸಿದೆ. ಈ ಸಾಲವು ಬ್ಯಾಂಕು ಮತ್ತು ಫಲಾನುಭವಿಗಳ ನಡುವೆ ಮಾತ್ರ ಇದ್ದು, ನಿಗಮಕ್ಕೆ ಯಾವುದೇ ರೀತಿಯ ಹೊಣೆಗಾರಿಕೆ ಇರುವುದಿಲ್ಲ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸಂಖ್ಯೆ: ಆಇ 590 ವೆಚ್ಚ-3 ದಿನಾಂಕ: 11/09/2012ರಡಿ ನೀಡಿದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ.ರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ. ಡಾ|| ಬಿ.ಆರ್.ಅಂಬೇಡ್ಕರ್, ವೀಧಿ ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
5. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
6. ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ-3, ವಿಧಾನಸೌಧ
7. ಮಾನ್ಯ ಸಮಾಜ ಕಲ್ಯಾಣ ಮತ್ತು ಬಂಧೀಖಾನೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಮಾನ್ಯ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಉಪ ಕಾರ್ಯದರ್ಶಿಗಳು 1 ಮತ್ತು 2 ಸಮಾಜ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು
10. ಸಂಯೋಜಕರು, ರಾಜ್ಯಮಟ್ಟದ ಬ್ಯಾಂಕರುಗಳ ಸಮಿತಿ.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು